Akashvani: Bangalore
National Bulletin In Kannada
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

14.02.2025 : 13.10hrs

**ಮುಖ್ಯಾಂಶಗಳು:**

1. ಕರ್ನಾಟಕದ ಬೆಂಗಳೂರಿನಲ್ಲಿ ೧೦ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನ; ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ
2. ೨೦೩೦ರ ವೇಳೆಗೆ ಭಾರತ-ಅಮೆರಿಕಾ ದ್ವಿಪಕ್ಷೀಯ ವ್ಯಾಪಾರ ೫೦೦ ಬಿಲಿಯನ್ ಡಾಲರ್‌ಗೆ ದ್ವಿಗುಣಗೊಳಿಸಲು ನಿರ್ಧಾರ - ಜಂಟಿ ಪತ್ರಿಕಾಗೋಷ್ಠಿಯಲ್ಲಿ ಪ್ರಧಾನಿ ಅಭಿಮತ
3. ಪುಲ್ವಾಮಾ ಭಯೋತ್ಪಾದನಾ ದಾಳಿಗೆ ೬ ವರ್ಷ; ಹುತಾತ್ಮ ಸಿಬ್ಬಂದಿಗೆ ಪ್ರಧಾನಿ, ಗೃಹ ಸಚಿವರಿಂದ ಗೌರವ ನಮನ
4. ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂ ಪಿಎಲ್ ೨೦೨೫ ರ ಮೂರನೇ ಆವೃತ್ತಿಗೆ ವಡೋದರಾದಲ್ಲಿಂದು ಚಾಲನೆ

********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದು ಕರ್ನಾಟಕದ ಪ್ರವಾಸ ಕೈಗೊಳ್ಳುತ್ತಿದ್ದು, ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಇಂದಿನಿಂದ ಎರಡು ದಿನಗಳ ಕಾಲ ನಡೆಯಲಿರುವ ೧೦ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ರಾಷ್ಟ್ರಪತಿ ಅವರ ಜೊತೆಗೆ ೧೧೫ ದೇಶಗಳ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ೬ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ೬೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ. ಈ ಸಮ್ಮೇಳನದಲ್ಲಿ ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವೆ ಅನ್ನಪೂರ್ಣ ದೇವಿ, ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಮಾಜಿ ರಾಜ್ಯ ಸಚಿವೆ ಮೀನಾಕ್ಷಿ ಲೇಖಿ, ಕಾಮನ್‌ವೆಲ್ತ್ ಪ್ರಧಾನ ಕಾರ್ಯದರ್ಶಿ ಪೆಟ್ರೀಷಿಯಾ ಸ್ಕಾಟ್ಲೆಂಡ್ ಮತ್ತು ಜಪಾನ್‌ನ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಪತ್ನಿ ಅಕಿ ಅಬೆ ಅವರು ಭಾಗವಹಿಸಿದ್ದಾರೆ. ಈ ಸಮ್ಮೇಳನದಿಂದ ಬರುವ ಆದಾಯವನ್ನು ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಬಳಸಲು ನಿರ್ಧರಿಸಲಾಗಿದೆ. ನಾಳೆ ರಾಷ್ಟ್ರಪತಿ ಜಾರ್ಖಂಡ್‌ಗೆ ತೆರಳಲಿದ್ದು, ರಾಂಚಿಯಲ್ಲಿರುವ ಬಿಐಟಿ ಮೆಸ್ರಾ ಸಂಸ್ಥೆಯ ಪ್ಲಾಟಿನಂ ಜುಬಿಲಿ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಲಿದ್ದಾರೆ.

********

೨೦೩೦ರ ವೇಳೆಗೆ ಭಾರತ ಹಾಗೂ ಅಮೆರಿಕಾ ನಡುವಿನ ದ್ವಿಪಕ್ಷೀಯ ವ್ಯಾಪಾರ ೫೦೦ ಬಿಲಿಯನ್ ಡಾಲರ್‌ಗೆ ದ್ವಿಗುಣಗೊಳಿಸಲು ನಿರ್ಧರಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಾಷಿಂಗ್ಟನ್ ಡಿಸಿಯಲ್ಲಿಂದು ಅಮೆರಿಕಾ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಭಾರತ-ಅಮೆರಿಕಾ ನಡುವಿನ ಕಾರ್ಯತಂತ್ರದ ಪಾಲುದಾರಿಕೆಯನ್ನು ಉಭಯ ರಾಷ್ಟ್ರಗಳು ಮುಂದುವರೆಸಲಿವೆ. ಭಾರತದ ರಕ್ಷಣಾ ಸನ್ನದ್ಧತೆಯಲ್ಲಿ ಅಮೆರಿಕಾ ಪ್ರಮುಖ ಪಾತ್ರ ವಹಿಸುತ್ತದೆ. ಕಾರ್ಯತಂತ್ರ ಹಾಗೂ ವಿಶ್ವಾಸರ್ಹಾ ಪಾಲುದಾರರಾಗಿ ಎರಡೂ ರಾಷ್ಟ್ರಗಳು ಜಂಟಿ ಅಭಿವೃದ್ಧಿ, ಜಂಟಿ ಉತ್ಪಾದನೆ ಮತ್ತು ತಂತ್ರಜ್ಞಾನ ವಿನಿಮಯದತ್ತ ಸಕ್ರಿಯವಾಗಿ ಸಾಗಿವೆ. ಭಯೋತ್ಪಾದನೆ ನಿಗ್ರಹ ಕುರಿತು ಉಭಯ ರಾಷ್ಟ್ರಗಳಲ್ಲಿ ಒಮ್ಮತವಿದ್ದು ಅದನ್ನು ತೊಡೆದು ಹಾಕಲು ದೃಢ ಕ್ರಮ ತೆಗೆದುಕೊಳ್ಳುವ ಅಗತ್ಯವಿದೆ ಎಂದು ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ೩೩ ಸೆಕೆಂಡ್

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಾತನಾಡಿ, ಜಗತ್ತಿನ ಅತಿ ಪುರಾತನ ಹಾಗೂ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರಗಳಾದ ಭಾರತ ಹಾಗೂ ಅಮೆರಿಕಾ ನಡುವೆ ವಿಶೇಷ ಬಾಂಧವ್ಯವಿದೆ. ಉಭಯ ದೇಶಗಳು ಇಂಧನ ಕುರಿತಂತೆ ಒಂದು ಮಹತ್ವದ ಒಪ್ಪಂದಕ್ಕೆ ಬಂದಿವೆ. ಇದು ಅಮೆರಿಕ ಭಾರತಕ್ಕೆ ತೈಲ ಮತ್ತು ನೈಸರ್ಗಿಕ ಅನಿಲದ ಪ್ರಮುಖ ಪೂರೈಕೆದಾರನಾಗುವುದನ್ನು ಖಚಿತಪಡಿಸುತ್ತದೆ. ಇದರ ಜೊತೆಗೆ ಭಾರತಕ್ಕೆ ಎಫ್-೩೫ ಸ್ಟೆಲ್ತ್ ಫೈಟರ್ ಜೆಟ್‌ಗಳನ್ನು ಪೂರೈಸಲು ಅಮೆರಿಕಾ ಪೂರಕ

ಕ್ರಮಗಳನ್ನು ಕೈಗೊಳ್ಳುತ್ತಿದೆ. ಭಯೋತ್ಪಾದನೆ ನಿಗ್ರಹಕ್ಕೆ ಉಭಯ ರಾಷ್ಟ್ರಗಳು ಉತ್ತಮ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲಿವೆ ಎಂದು ಹೇಳಿದರು. ತಮ್ಮ ಎರಡು ದಿನಗಳ ಅಮೆರಿಕಾ ಪ್ರವಾಸವನ್ನು ಮುಗಿಸಿರುವ ಪ್ರಧಾನಿ ನರೇಂದ್ರ ಮೋದಿ, ಭಾರತಕ್ಕೆ ವಾಪಸ್ ಮರಳುತ್ತಿದ್ದಾರೆ. ಅಧ್ಯಕ್ಷ ಟ್ರಂಪ್ ಅವರ ಎರಡನೇ ಅಧ್ಯಕ್ಷೀಯ ಅವಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕಕ್ಕೆ ನೀಡಿದ ಮೊದಲ ಭೇಟಿ ಇದಾಗಿದೆ.

********

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಎರಡನೇ ಅವಧಿಯ ಅಧಿಕಾರ ಸ್ವೀಕಾರದ ಮೂರು ವಾರಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಅಮೆರಿಕಾ ಭೇಟಿ ಭಾರತ-ಅಮೆರಿಕಾ ಸಂಬಂಧಕ್ಕೆ ಉಭಯ ನಾಯಕರು ನೀಡುವ ಆದ್ಯತೆಯ ಸೂಚಕವಾಗಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರೀ ತಿಳಿಸಿದ್ದಾರೆ. ವಾಷಿಂಗ್ಟನ್ ಡಿಸಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಕಾರ್ಯ ತಂತ್ರ ಹಾಗೂ ಭದ್ರತಾ ಸಹಕಾರ, ರಕ್ಷಣೆ, ವ್ಯಾಪಾರ, ಆರ್ಥಿಕ ವಿನಿಮಯ, ತಂತ್ರಜ್ಞಾನ, ಇಂಧನ ಭದ್ರತೆ, ಜನರಿಂದ ಜನರ ಸಂಪರ್ಕ ಸೇರಿದಂತೆ ವಿವಿಧ ಪ್ರಾದೇಶಿಕ ಹಾಗೂ ಜಾಗತಿಕ ವಿಷಯಗಳ ಕುರಿತು ಭೇಟಿಯ ಸಮಯದಲ್ಲಿ ಚರ್ಚಿಸಲಾಗಿದೆ ಎಂದು ತಿಳಿಸಿದರು. ೨೦೩೫ರವರೆಗೆ ಅಮೆರಿಕಾ ಭಾರತ ಪ್ರಮುಖ ಪಾಲುದಾರಿಕೆಗಾಗಿ ನೂತನ ೧೦ ವರ್ಷಗಳ ಚೌಕಟ್ಟನ್ನು ಅಂತಿಮಗೊಳಿಸುವ ಕುರಿತಂತೆ ಉಭಯ ನಾಯಕರು ಘೋಷಿಸಿದ್ದಾರೆ. ಇದರ ಜೊತೆಗೆ ಪರಸ್ಪರ ಪ್ರಯೋಜನಕಾರಿಯಾದ ಬಹುವಲಯ ದ್ವಿಪಕ್ಷೀಯ ವ್ಯಾಪಾರ ಒಪ್ಪಂದ ಮೊದಲ ಹಂತದ ಮಾತುಕತೆಯನ್ನು ಶೀಘ್ರದಲ್ಲೇ ನಡೆಸುವ ಕುರಿತಂತೆ ಉಭಯ ನಾಯಕರು ಘೋಷಿಸಿದ್ದಾರೆ ಎಂದು ವಿಕ್ರಮ್ ಮಿಸ್ರೀ ಮಾಹಿತಿ ನೀಡಿದ್ದಾರೆ.

********

ಜಮ್ಮು-ಕಾಶ್ಮೀರದ ಪುಲ್ವಾಮಾದಲ್ಲಿ ೪೦ ಸಿಆರ್‌ಪಿಎಫ್ ಸಿಬ್ಬಂದಿ ಹುತಾತ್ಮರಾಗಲು ಕಾರಣವಾಗಿದ್ದ ಭೀಕರ ಭಯೋತ್ಪಾದನೆ ದಾಳಿಗೆ ಇಂದಿಗೆ ಆರು ವರ್ಷ. ಈ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ೨೦೧೯ರ ಆ ದಾಳಿಯಲ್ಲಿ ಹುತಾತ್ಮರಾದ ಸೈನಿಕರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ದೇಶದ ವೀರ ಯೋಧರ ತ್ಯಾಗ ಮತ್ತು ಅಚಲ ಬದ್ಧತೆಯನ್ನು ಮುಂಬರುವ ಪೀಳಿಗೆಗಳು ಸದಾ ಸ್ಮರಿಸಲಿವೆ ಎಂದಿದ್ದಾರೆ. ಭಯೋತ್ಪಾದಕರ ವಿರುದ್ಧ ಅಭಿಯಾನದ ರೂಪದಲ್ಲಿ ಕಾರ್ಯಾಚರಣೆ ನಡೆಸಿ, ಭಯೋತ್ಪಾದನೆ ನಿರ್ಮೂಲನೆಗೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಅವರು, ಹುತಾತ್ಮ ಯೋಧರಿಗೆ ಗೌರವ ನಮನ ಸಲ್ಲಿಸಿದ್ದು, ಭಯೋತ್ಪಾದನೆ ಮನುಕುಲದ ಅತಿ ದೊಡ್ಡ ವೈರಿಯಾಗಿದ್ದು, ಇಡೀ ಜಗತ್ತು ಅದನ್ನು ತೊಡೆದು ಹಾಕಲು ಒಂದಾಗಿದೆ. ಎನ್‌ಡಿಎ ಸರ್ಕಾರ ಭಯೋತ್ಪಾದನೆ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿ ಹೊಂದಿದೆ ಎಂದಿದ್ದಾರೆ.

********

ಭಾರತ ಮತ್ತು ಥೈಲ್ಯಾಂಡ್ ೨ ಸಾವಿರ ವರ್ಷಗಳಿಗೂ ಹಳೆಯ ಸಾಂಸ್ಕೃತಿಕ ಸಂಬಂಧಗಳನ್ನು ಹೊಂದಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಥೈಲ್ಯಾಂಡ್‌ನಲ್ಲಿ ಆಯೋಜಿಸಿರುವ ಸಂವಾದ್ ಕಾರ್ಯಕ್ರಮದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಪಾಲ್ಗೊಂಡು ಮಾತನಾಡಿದ ಪ್ರಧಾನಿ, ಭಾರತದ ಆಕ್ಟ್ ಈಸ್ಟ್ ನೀತಿ ಹಾಗೂ ಥೈಲ್ಯಾಂಡ್ ಆಕ್ಟ್ ವೆಸ್ಟ್ ನೀತಿ ಪರಸ್ಪರ ಪೂರಕವಾಗಿದ್ದು, ಪ್ರಗತಿ ಹಾಗೂ ಸಮೃದ್ಧಿಯನ್ನು ಉತ್ತೇಜಿಸುತ್ತದೆ ಎಂದರು.

********

ಕಳೆದ ೪ ದಿನಗಳಿಂದ ಬೆಂಗಳೂರಿನ ಯಲಹಂಕದ ವಾಯುನೆಲೆಯಲ್ಲಿ ನಡೆದ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ೨೦೨೫ಕ್ಕೆ ಇಂದು ತೆರೆ ಬೀಳಲಿದೆ. ಮೊದಲು ವಾಣಿಜ್ಯ ವ್ಯವಹಾರಗಳಿಗೆ ಮೀಸಲಿಟ್ಟ ದಿನಗಳ ಬಳಿಕ, ಕೊನೆಯ ಎರಡು ದಿನ ಸಾರ್ವಜನಿಕ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿರುವ ಹಿನ್ನೆಲೆಯಲ್ಲಿ, ಅಪಾರ ಸಂಖ್ಯೆಯಲ್ಲಿ ಜನರು ವೀಕ್ಷಣೆಗೆ ಆಗಮಿಸುತ್ತಿದ್ದಾರೆ. ನಿನ್ನೆ ನಡೆದ ವೈಮಾನಿಕ ಪ್ರದರ್ಶನದಲ್ಲಿ ಸೂರ್ಯಕಿರಣ, ಅಮೆರಿಕ ಎಫ್-೩೫, ರಷ್ಯಾದ SU-೫೭, ತೇಜಸ್ ಹಾಗೂ ಹಗುರ ಯುದ್ಧ ಹೆಲಿಕಾಪ್ಟರ್‌ಗಳ ಪ್ರದರ್ಶನ ಮೈನವಿರೇಳಿಸಿದವು. ಇಂದೂ ಸಹ ಸುಖೋಯ್ ಸೇರಿದಂತೆ ಹಲವು ಯುದ್ಧ ವಿಮಾನಗಳು ಬಾನಂಗಳದಲ್ಲಿ ಚಿತ್ತಾರ ಬಿಡಿಸಲಿವೆ.

********

ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ೨೦೨೫ ರ ಮೂರನೇ ಆವೃತ್ತಿಗೆ ವಡೋದರಾದಲ್ಲಿಂದು ಚಾಲನೆ ದೊರೆಯಲಿದೆ. ಸಂಜೆ ೭.೩೦ಕ್ಕೆ ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್

ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಸೆಣಸಾಟ ನಡೆಸಲಿದ್ದಾರೆ. ಪಂದ್ಯಾವಳಿಯು ಮಾರ್ಚ್ ೧೫ ರವರೆಗೆ ನಡೆಯಲಿದ್ದು, ಅಂತಿಮ ಪಂದ್ಯವು ಬ್ರಬೋರ್ನ್ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯಾವಳಿಯಲ್ಲಿ ದೆಹಲಿ ಕ್ಯಾಪಿಟಲ್ಸ್, ಗುಜರಾತ್ ಜೈಂಟ್ಸ್, ಯುಪಿ ವಾರಿಯರ್ಸ್, ಮುಂಬೈ ಇಂಡಿಯನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಸೇರಿದಂತೆ ಒಟ್ಟು ೫ ತಂಡಗಳಿವೆ. ಹಾಲಿ ಚಾಂಪಿಯನ್ ಆರ್ ಸಿಬಿ ಈ ವರ್ಷವೂ ತಮ್ಮ ಪ್ರಶಸ್ತಿಯನ್ನು ಉಳಿಸಿಕೊಳ್ಳುವ ಹಂಬಲದೊಂದಿಗೆ ಕಣಕ್ಕಿಳಿಯುತ್ತಿದೆ.

********

ಜನವರಿ ೨೮ ರಿಂದ ಉತ್ತರಾಖಂಡದಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟ ಇಂದು ಮುಕ್ತಾಯವಾಗಲಿದೆ. ಉತ್ತರಾಖಂಡದ ಹಲ್ದ್ವಾನಿಯಲ್ಲಿ ಇಂದು ಮಧ್ಯಾಹ್ನ ೨ ಗಂಟೆಗೆ ನಡೆಯಲಿರುವ ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಭಾಗವಹಿಸಲಿದ್ದಾರೆ. ದೇಶಾದ್ಯಂತದ ಕ್ರೀಡಾಪಟುಗಳು ४೫೭ ಸ್ವರ್ಣ, ४೫೫ ಬೆಳ್ಳಿ ಹಾಗೂ ೬೧೧ ಕಂಚಿನ ಪದಕಗಳೊಂದಿಗೆ ಒಟ್ಟು ೧ ಸಾವಿರದ ೫೨೩ ಪದಕಗಳನ್ನು ತಮ್ಮದಾಗಿಸಿಕೊಂಡಿದ್ದಾರೆ.

****END***